# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರವರ ಕಛೇರಿ, ಕೆಂಪೇಗೌಡನಗರ ಉಪವಿಭಾಗ

ಚಿಕ್ಕಪೇಟೆ ವಿಭಾಗ, ಬೆಂಗಳೂರು.

ಸ.ಕಾ.ನಿ.ಅ(ಕೆ.ಗೌ.ನ)ಪಿ.ಆರ್/112 /2021-22. ದಿನಾಂಕ : 19/7/202

ದಿನಾಂಕ: 17-07-2021 ರಂದು ಈ ಉಪವಿಭಾಗದ ವಾರ್ಡ್ ಸಂಖ್ಯೆ: 143ರ ವಾರ್ಡ್ ಕಛೇರಿಯಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡಾವಳಿಗಳು ಈ ಕೆಳಕಂಡಂತಿರುತ್ತದೆ.

**ಉಪಸ್ಥಿತರು:**

| ಕ್ರ ಸಂ. | ಹೆಸರು | ಹುದ್ದೆ | ಮೊಬೈಲ್ ಸಂಖ್ಯೆ |
|---|---|---|---|
| 1 | ಶ್ರೀ. ಉಮಾಶಂಕರ್ | ನೋಡಲ್ ಅಧಿಕಾರಿಗಳು ಹಾಗೂ ಉಪನಿರ್ದೇಶಕರು ನಗರ ಯೋಜನೆ (ದಕ್ಷಿಣ) | 9480684418 |
| 2 | ಶ್ರೀ. ವೆಂಕಟೇಶ್ ಆರ್ | ಕಾರ್ಯದರ್ಶಿ ಹಾಗೂ ಸಹಾಯಕ ಅಭಿಯಂತರರು 143 | 9480684415 |
| 3 | ಶ್ರೀ.ಪಿ. ನರಸಿಂಹ | ಕಿರಿಯ ಆರೋಗ್ಯ ಪರಿವೀಕ್ಷಕರು | 9449153115 |
| 4 | ಶ್ರೀ.ನವೀನ್.ಜಿ | J.E.TEC | 8971318650 |
| 5 | ಶ್ರೀ.ಸಚಿನ್ .ಡಿ ಪಿ.ಎಸ್.ಐ | ವಿ.ವಿ.ಪುರಂ ಪೊಲೀಸ್ ಠಾಣೆ | 8310102018 |
| 6 | ಸುಮ.ಸಿ | ಸಹಾಯಕ ಅಭಿಯಂತರರು Road Infrastructure (south) | 8197047778 |
| 7 | ಶ್ರೀ.ಗೋಪಾಲ | ಬೆಸ್ಕಾಂ ಅಭಿಯಂತರರು | |
| 8 | ಶ್ರೀ.ಮುತ್ತುರಾಜು.ಎಸ್ | ವಿ.ವಿ.ಪುರಂ ಪೊಲೀಸ್ ಠಾಣೆ | 9741747717 |
| 9 | ಅನ್ನಪೂರ್ಣ ಪಿ.ಎಸ್.ಐ | ಶಂಕರಪುರಂ ಪೊಲೀಸ್ ಠಾಣೆ | 9741864915 |
| 10 | ಬಸವನಗುಡಿ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್ | ಸದಸ್ಯರು | 8217636732 |
| 11 | ಶ್ರೀ.ರಾಮಯ್ಯಂಗಾರ್ ರಸ್ತೆ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್ | ಸದಸ್ಯರು | 9901066586 |
| 12 | ಎಂ.ಎಂ.ವಿ ರಸ್ತೆ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್ | ಸದಸ್ಯರು | 9448387878 |
| 13 | ಚಿಕ್ಕಣ್ಣ ಗಾರ್ಡನ್ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್ | ಸದಸ್ಯರು | 9448508638 |

ದಿನಾಂಕ: 17-07-2021 ರಂದು ನಡೆದ ವಾರ್ಡ್ -143 ರ ಸಮಿತಿ ಸಭೆಯ ನಡಾವಳಿಗಳು:

ಮಾನ್ಯ ನೋಡಲ್ ಅಧಿಕಾರಿಗಳು ಹಾಗೂ ಅಧ್ಯಕ್ಷರು ರವರ ಅನುಮತಿಯೊಂದಿಗೆ ಕಾರ್ಯದರ್ಶಿಗಳು ಹಾಗೂ ಸಹಾಯಕ ಅಭಿಯಂತರರು ಸಭೆಯಲ್ಲಿ ಹಾಜರಿದ್ದ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್‌ಗಳ ಅಧ್ಯಕ್ಷರು ಹಾಗೂ ವಿವಿಧ ಇಲಾಖೆಗಳ ಅಧಿಕಾರಿಗಳನ್ನು ಸ್ವಾಗತಿಸುವ ಮೂಲಕ ಸಭೆಯನ್ನು ಪ್ರಾರಂಭಿಸಲಾಯಿತು.

ಮೊದಲು ನೋಡಲ್ ಅಧಿಕಾರಿಗಳು ಮಾತನಾಡಿ ಬಿ.ಬಿ.ಎಂ.ಪಿ ಟ್ರಾಫಿಕ್ ಇಂಜನಿಯರಿಂಗ್ ಸೆಲ್ (TEC) ವಿಭಾಗಕ್ಕೆ ಸಂಬಂಧಿಸಿದಂತೆ ಈ ಹಿಂದಿನ ಸಭೆಗಳಲ್ಲಿ ರೆಸಿಡೆಂಟ್ ವೆಲ್‌ಫೇರ್ ಅಸೋಷಿಯೇಷನ್‌ಗಳ ಸದಸ್ಯರುಗಳು ಪ್ರಸ್ತಾಪಿಸಲಾಗಿದ್ದ ವಿಷಯಗಳಿಗೆ ಸಂಬಂಧಿಸಿದಂತೆ ತೆಗೆದುಕೊಂಡ ಕ್ರಮಗಳ ಬಗ್ಗೆ ವಿವರಿಸಲು ಸಭೆಯಲ್ಲಿ ಹಾಜರಿದ್ದ (TEC) ವಿಭಾಗದ ಅಭಿಯಂತರರಾದ ಶ್ರೀ.ನವೀನ್‌ಕುಮಾರ್ ರವರಿಗೆ ವಿವರಿಸಲು ಸೂಚಿಸಿದರು. ಈ ವಿಚಾರವಾಗಿ ನವೀನ್‌ಕುಮಾರ್ ರವರು ಮಾತನಾಡಿ ಸಜ್ಜನ್‌ರಾವ್ ರಸ್ತೆಯಲ್ಲಿ 1 ಸಂಖ್ಯೆ, ಡಯಾಗನಲ್ ರಸ್ತೆಯಲ್ಲಿ 3 ಸಂಖ್ಯೆ Pedastrain crossing (HRPC)ಗಳನ್ನು ಅಳವಡಿಸಲು ಪ್ರಸ್ತಾವನೆಯನ್ನು ಸಲ್ಲಿಸಿ ಮಂಜೂರಾತಿಯನ್ನು ಪಡೆಯಲಾಗಿದ್ದು, ಆದಷ್ಟು ಶೀಘ್ರವಾಗಿ ಇವುಗಳನ್ನು ಅಳವಡಿಸಲಾಗುವುದೆಂದು ತಿಳಿಸಿದರು. ಲಾಲ್‌ಬಾಗ್ ವೆಸ್ಟ್‌ಗೇಟ್ ಸರ್ಕಲ್‌ನ ಅಭಿವೃದ್ಧಿಗಾಗಿ ವಾಸ್ತು ಶಿಲ್ಪಿರವರ ವಿನ್ಯಾಸವನ್ನು ಪಡೆಯಲಾಗುತ್ತಿದ್ದು ಇದು ದೊರೆತ ನಂತರ ಮಂಜೂರಾತಿ ಪಡೆದು ಈ ಬಗ್ಗೆ ಕ್ರಮವಹಿಸಲಾಗುವುದೆಂದು ಸಭೆಗೆ ತಿಳಿಸಿದರು.

ನಂತರ ಪುನಃ ನೋಡಲ್ ಅಧಿಕಾರಿಗಳು ಮಾತನಾಡಿ ಬಸವನಗುಡಿ ರೆಸಿಡೆಂಟ್ ವೆಲ್‌ಫೇರ್ ಅಸೋಸಿಯೇಷನ್‌ನ ಶ್ರೀ.ರಾಜುರವರು ಹಿಂದಿನ ಸಭೆಗಳಲ್ಲಿ ಪ್ರಸ್ತಾಪಿಸಿದ್ದ ವಿಷಯವಾದ ಮಾಧವರಾವ್ ವೃತ್ತದಿಂದ ವಾಣಿ ವಿಲಾಸ ರಸ್ತೆ ವರೆಗಿನ ಕನಕಪುರ ರಸ್ತೆಯಲ್ಲಿ ವೈಟ್ ಟಾಪಿಂಗ್ ಕಾಮಗಾರಿಯನ್ನು ಕೈಗೊಳ್ಳುವ ಸಂಬಂಧ ಪ್ರಾಜೆಕ್ಟ್ ವಿಭಾಗದ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರಾದ ಶ್ರೀ. ಅನಂತರಾಜು ರವರೊಂದಿಗೆ ಚರ್ಚಿಸಲಾಗಿ ಸದರಿ ಕಾಮಗಾರಿಯನ್ನು 15 ದಿನಗಳ ಒಳಗಾಗಿ ಪ್ರಾರಂಭಿಸುವುದಾಗಿ ತಿಳಿಸಿರುತ್ತಾರೆ ಎಂದು ಸಭೆಗೆ ತಿಳಿಸಿದರು.

ನಂತರ ಪುನಃ ನೋಡಲ್ ಅಧಿಕಾರಿಗಳು ಮಾತನಾಡಿ ಎಲ್.ಬಿ.ಎಫ್ ರಸ್ತೆಯಲ್ಲಿರುವ ಮಸೀದಿಯಲ್ಲಿ ಧ್ವನಿವರ್ಧಕಗಳನ್ನು ಉಪಯೋಗಿಸಿ ಪ್ರಾರ್ಥನೆ ಮಾಡುವುದರಿಂದ ಶಬ್ಧ ಮಾಲಿನ್ಯ ಉಂಟಾಗಿ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವುದಾಗಿ ತಿಳಿಸಿ, ಇದನ್ನು ತಡೆಗಟ್ಟಲು ಮಾನ್ಯ ಸರ್ವೋಚ್ಛ ನ್ಯಾಯಾಲಯದ ಆದೇಶದಂತೆ ಕ್ರಮಕೈಗೊಳ್ಳಬೇಕೆಂದು ರಾಮಯ್ಯಂಗಾರ್ ರಸ್ತೆ ರೆಸಿಡೆಂಟ್ ವೆಲ್‌ಫೇರ್ ಅಸೋಸಿಯೇಷನ್‌ನ ಶ್ರೀ.ಓ.ವಿ.ಜಯಕುಮಾರ್ ರವರು ಈ ಹಿಂದಿನ ಸಭೆಯಲ್ಲಿ ಪ್ರಸ್ತಾಪಿಸಿದ್ದ ವಿಷಯದ ಬಗ್ಗೆ ಕೈಗೊಂಡ ಕ್ರಮದ ಬಗ್ಗೆ ತಿಳಿಸಲು ಸಭೆಯಲ್ಲಿ ಹಾಜರಿದ್ದ ವಿ.ವಿ.ಪುರಂ ಪೊಲೀಸ್ ಠಾಣೆಯ

ಸಬ್‌ಇನ್ಸ್‌ಪೆಕ್ಟರ್ ರವರನ್ನು ಕೋರಿದರು. ಈ ಬಗ್ಗೆ ಸದರಿಯವರ ವಿರುದ್ಧ ಸರ್ವೋಚ್ಚ ನ್ಯಾಯಾಲಯದ ಆದೇಶದ ಮೇರೆಗೆ ಕೇಸ್ ದಾಖಲಿಸಲಾಗಿರುತ್ತದೆಂದು ಸಭೆಗೆ ತಿಳಿಸಿದರು.

ನಂತರ ಸಭೆಯಲ್ಲಿ ಹಾಜರಿದ್ದ ಶಂಕರಪುರಂ ಪೊಲೀಸ್ ಠಾಣೆಯ ಸಬ್‌ಇನ್ಸ್‌ಪೆಕ್ಟರ್ ರವರು ಮಾತನಾಡಿ ಮಹಿಳಾ ಸೇವಾ ಸಮಾಜದ ಎದುರು ಕೆ.ಆರ್. ರಸ್ತೆಯಲ್ಲಿ ಮೆಟ್ರೋ ಸೇತುವೆ ಕೆಳಗೆ ಹೂವಿನ ಮಾರಾಟಗಾರರು ಹೂವಿನ ಅಂಗಡಿಗಳನ್ನು ಇಟ್ಟುಕೊಂಡಿದ್ದು ಇದರಿಂದ ಸಮಸ್ಯೆಯಾಗುತ್ತಿರುವುದಾಗಿ ತಿಳಿಸಿ ಅವುಗಳನ್ನು ತೆರವುಗೊಳಿಸಬೇಕೆಂದು ಸಭೆಯಲ್ಲಿ ಕೋರಿದರು. ಈ ಬಗ್ಗೆ ಕೂಡಲೇ ಕ್ರಮ ಕೈಗೊಳ್ಳಲು ಸಭೆಯಲ್ಲಿ ಹಾಜರಿದ್ದ ಕಿರಿಯ ಆರೋಗ್ಯ ಪರಿವೀಕ್ಷಕರಿಗೆ ನೋಡಲ್ ಅಧಿಕಾರಿಗಳು ಸೂಚಿಸಿದರು.

ನಂತರ ಪುನಃ ಶಂಕರಪುರಂ ಠಾಣೆಯ ಸಬ್‌ಇನ್ಸ್‌ಪೆಕ್ಟರ್ ರವರು ಮಾತನಾಡಿ ಪಂಪಮಹಾಕವಿ ರಸ್ತೆಯಲ್ಲಿರುವ ಬೆಂಗಳೂರು ಸಿಟಿ ಇನ್ಸ್‌ಸ್ಟಿಟ್ಯೂಟ್ ಹತ್ತಿರ ಚಾಮರಾಜಪೇಟೆ 5ನೇ ಮುಖ್ಯರಸ್ತೆ, ಶಂಕರ ಕ್ಯಾನ್ಸರ್ ಆಸ್ಪತ್ರೆ ಮುಂಭಾಗ ಮತ್ತು ಪಂಪಮಹಾಕವಿ ರಸ್ತೆಯಲ್ಲಿ ರಾಯ ರಾಯ ಕಲ್ಯಾಣ ಮಂಟಪದಿಂದ ಸಿಟಿ ಇನ್ಸ್‌ಸ್ಟಿಟ್ಯೂಟ್‌ವರೆಗೆ ಕಳ್ಳತನ ಪ್ರಕರಣಗಳು ಜಾಸ್ತಿಯಾಗುತ್ತಿದ್ದ ಈ ಸ್ಥಳಗಳಲ್ಲಿ ಸಿ.ಸಿ.ಟಿ.ವಿ.ಗಳನ್ನು ಅಳವಡಿಸಿಕೊಡಬೇಕೆಂದು ಸಭೆಗೆ ತಿಳಿಸಿದರು. ಈ ಬಗ್ಗೆ ಸೂಕ್ತ ಕ್ರಮವಹಿಸಲು ವಾರ್ಡ್‌ನ ಅಭಿಯಂತರರಿಗೆ ನೋಡಲ್ ಅಧಿಕಾರಿಗಳು ತಿಳಿಸಿದರು.

ನಂತರ ಬಸವನಗುಡಿ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್‌ನ ಶ್ರೀ. ರಾಜು ರವರು ಮಾತನಾಡಿ ಈ ಹಿಂದಿನ ಸಭೆಗಳಲ್ಲಿ ಪ್ರಸ್ತಾಪಿಸಲಾಗಿದ್ದ ವಿಷಯವಾದ ಶ್ರೀರಾಮ ಮಂದಿರ ರಸ್ತೆಯ ಕನ್ಸರ್‌ವೆನ್ಸಿಯಲ್ಲಿ ಹಸುಗಳನ್ನು ಕಟ್ಟಿಕೊಂಡಿದ್ದು, ಇದನ್ನು ತೆರವುಗೊಳಿಸಲು ಪುನಃ ಸಭೆಯಲ್ಲಿ ಪ್ರಸ್ತಾಪಿಸಿದರು. ಆಗ ನೋಡಲ್ ಅಧಿಕಾರಿಗಳು ಮಾತನಾಡಿ ಬಿಬಿಎಂಪಿ ಪಶುಸಂಗೋಪನಾ ಇಲಾಖೆಯ ಅಧಿಕಾರಿಯವರನ್ನು ಸಭೆಗೆ ಹಾಜರಾಗಲು ತಿಳಿಸಲಾಗಿದ್ದರೂ ಸಹ ಸಭೆಗೆ ಹಾಜರಾಗಿರುವುದಿಲ್ಲ. ಈ ವಿಷಯವಾಗಿ ಪಶುವೈದ್ಯಾಧಿಕಾರಿಗಳೇ ಉತ್ತರ ನೀಡಬೇಕಾಗಿರುವುದರಿಂದ ಅವರಿಂದ ವಿವರಣೆ ಪಡೆದು ತಿಳಿಸುವುದಾಗಿ ಸಭೆಗೆ ತಿಳಿಸಿದರು.

ನಂತರ ಬಸವನಗುಡಿ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್‌ನ ಶ್ರೀ. ರಾಜು ರವರು ಮಾತನಾಡಿ ಬಿಬಿಎಂಪಿ ಅರಣ್ಯ ವಿಭಾಗದಿಂದ ಬಸವನಗುಡಿ ವ್ಯಾಪ್ತಿಯಲ್ಲಿ ಹಲವಾರು ಕಡೆ ಮರಗಳ ಕೊಂಬೆಗಳನ್ನು ತೆಗೆಸಿಕೊಡುವಂತೆ ವಲಯ ಅರಣ್ಯಾಧಿಕಾರಿಗಳಾದ ಶ್ರೀ. ಚಿದಾನಂದ್ ರವರನ್ನು ಹಲವಾರು ಬಾರಿ ಕೋರಲಾಗಿದ್ದರೂ ಈ ಬಗ್ಗೆ ಅವರು ಯಾವುದೇ ಕ್ರಮ ಕೈಗೊಂಡಿರುವುದಿಲ್ಲವೆಂದು ಸಭೆಗೆ ತಿಳಿಸಿದರು. ಆಗ ನೋಡಲ್ ಅಧಿಕಾರಿಗಳು ಮಾತನಾಡಿ ಶ್ರೀ. ಚಿದಾನಂದ್ ರವರನ್ನು ಈ ದಿನದ ಸಭೆಗೆ ಹಾಜರಾಗಲು ತಿಳಿಸಲಾಗಿದ್ದರೂ ಸಭೆಗೆ ಬಂದಿರುವುದಿಲ್ಲವೆಂದು ತಿಳಿಸಿ ಈ ಬಗ್ಗೆ ಕೂಡಲೇ ಕ್ರಮವಹಿಸಬೇಕೆಂದು ಸದರಿಯವರನ್ನು ಕೋರಲಾಗುವುದೆಂದು ಸಭೆಗೆ ತಿಳಿಸಿದರು.

ನಂತರ ನೋಡಲ್ ಅಧಿಕಾರಿಗಳು ಮಾತನಾಡಿ ರಸ್ತೆ ಮೂಲಭೂತ ಸೌಕರ್ಯ ವಿಭಾಗದ ವತಿಯಿಂದ ಕೈಗೊಳ್ಳಲಾಗಿದ್ದ ಕಾಮಗಾರಿಗಳಲ್ಲಿ ಆಗಿರುವ ಕೆಲವು ನ್ಯೂನ್ಯತೆಗಳನ್ನು ಸರಿಪಡಿಸಲು ಈ ಹಿಂದಿನ ಸಭೆಗಳಲ್ಲಿ ಬಸವನಗುಡಿ ರೆಸಿಡೆಂಟ್ಸ್ ವೆಲ್‌ಫೇರ್ ಅಸೋಸಿಯೇಷನ್‌ನ ಶ್ರೀ. ರಾಜು ರವರು ಪ್ರಸ್ತಾಪಿಸಿದ್ದ ವಿಷಯಗಳ ವಿಚಾರವಾಗಿ ಕೈಗೊಂಡ ಕ್ರಮಗಳ ಬಗ್ಗೆ ತಿಳಿಸಲು ಸಭೆಯಲ್ಲಿ ಹಾಜರಿದ್ದ ರಸ್ತೆ ಮೂಲಭೂತ ಸೌಕರ್ಯ ವಿಭಾಗದ ಸಹಾಯಕ ಅಭಿಯಂತರರಾದ ಶ್ರೀಮತಿ.ಸುಮಾ ರವರಿಗೆ ನೋಡಲ್ ಅಧಿಕಾರಿಗಳು ತಿಳಿಸಿದರು. ಈ ವಿಷಯವಾಗಿ ಶ್ರೀಮತಿ. ಸುಮಾ ರವರು ಮಾತನಾಡಿ ಕಾಮಗಾರಿಗಳ ಅನುಷ್ಠಾನದಲ್ಲಿ ಆಗಿರುವ ನ್ಯೂನ್ಯತೆಗಳನ್ನು ಶೀಘ್ರವಾಗಿ ಸರಿಪಡಿಸುವುದಾಗಿ ಸಭೆಗೆ ತಿಳಿಸಿದರು.

ನಂತರ ಕಾರ್ಯದರ್ಶಿಗಳ ವಂದನಾರ್ಪಣೆಯೊಂದಿಗೆ ವಾರ್ಡ್ ಸಮಿತಿ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

19/7/2021.

ಕಾರ್ಯದರ್ಶಿಗಳು ಹಾಗೂ
ಸಹಾಯಕ ಅಭಿಯಂತರರು
ವಾರ್ಡ್ –143 ವಿ. ವಿ.ಪುರಂ

19/7/2021

ನೋಡಲ್ ಅಧಿಕಾರಿಗಳು
ವಾರ್ಡ್ ಸಂಖ್ಯೆ: 143 ಹಾಗೂ
ಉಪನಿರ್ದೇಶಕರು ನಗರ ಯೋಜನೆ (ದಕ್ಷಿಣ)